# ATLETIC MEET AWARD WINNERS

**21-August-2019**




## ಜೂನಿಯರ್ ವಿಭಾಗದ ಅಥ್ಲೆಟಿಕ್ಸ್‌ನಲ್ಲಿ ವಿದ್ಯಾರ್ಥಿನಿಯರ ಸಾಧನೆ

ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಪ್ರಥಮ ವರ್ಷದ ಬಿ.ಕಾಂ ವಿದ್ಯಾರ್ಥಿನಿಯರಾದ ಕು. ಕವನ ಕೆ ಹಾಗೂ ಕು.ಬಿಂದುಶ್ರೀ.ಯು ಅವರುಗಳು ಕ್ರಮವಾಗಿ ಓಟದ ಸ್ಪರ್ಧೆ ಹಾಗೂ ಲಾಂಗ್‌ಜಂಪ್ ಸ್ಪರ್ಧೆಗಳಲ್ಲಿ ಭಾಗವಹಿಸಿ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ.

ದಿನಾಂಕ:18.08.2019 ಹಾಗೂ 19.08.2019ಗಳಂದು ಮೈಸೂರು ಜಿಲ್ಲಾ ಅಥ್ಲೆಟಿಕ್ಸ್ ಅಸೋಷಿಯೇಷನ್ ವತಿಯಿಂದ ಮೈಸೂರು ಜಿಲ್ಲಾ ಮಟ್ಟದ ಜೂನಿಯರ್ಸ್ ವಿಭಾಗದ 18 ವರ್ಷದೊಳಗಿನವರ ಅಥ್ಲೆಟಿಕ್ಸ್ ಕ್ರೀಡಾಕೂಟವು ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಜರುಗಿದ್ದು ಈ ಕ್ರೀಡಾಕೂಟದಲ್ಲಿ ಕಾಲೇಜಿನ ವಿದ್ಯಾರ್ಥಿನಯರಾದ ಕು.ಕವನ.ಕೆ. ಅವರು 1500 ಮೀಟರ್ ಓಟದ ಸ್ಪರ್ಧೆಯಲ್ಲಿ ಚತುರ್ಥ ಸ್ಥಾನವನ್ನು ಪಡೆದಿರುತ್ತಾರೆ ಹಾಗೂ ಕು.ಬಿಂದುಶ್ರೀ.ಯು ಅವರು ಉದ್ದಜಿಗಿತ ಸ್ಪರ್ಧೆಯಲ್ಲಿ ಚತುರ್ಥ ಸ್ಥಾನವನ್ನು ಪಡೆದಿರುತ್ತಾರೆ. ವಿದ್ಯಾರ್ಥಿನಿಯರನ್ನು ಕಾಲೇಜಿನ ಅಧ್ಯಾಪಕರು ಹಾಗೂ ಅಧ್ಯಾಪಕೇತರರು ಅಭಿನಂದಿಸಿರುತ್ತಾರೆ.

ಚಿತ್ರದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್.ಮರೀಗೌಡ, ಕ್ರೀಡಾ ಕಾರ್ಯದರ್ಶಿಗಳಾದ ಪ್ರೊ.ಆರ್.ಸಿದ್ಧರಾಜು, ದೈಹಿಕ ಶಿಕ್ಷಣ ಶಿಕ್ಷಕರಾದ ಪ್ರಸಾದ್.ಎಂ.ವಿ, ಕು. ಕವನ.ಕೆ. ಹಾಗೂ ಕು. ಬಿಂದುಶ್ರೀ.ಯು ಅವರನ್ನು ಕಾಣಬಹುದು.









